# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆ / ನಿರ್ದೇಶನಾಲಯ / ಆಯುಕ್ತಾಲಯ/ ನಿಗಮ / ಮಂಡಳಿಗಳ ಕೇಂದ್ರ ಸ್ಥಾನದ ಕಛೇರಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನು ನೇಮಿಸುವ ಬಗ್ಗೆ

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯು 2016, ದಿನಾಂಕ 14.03.2016
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 88 ಸೇಲೋಯು 2016, ದಿನಾಂಕ 22.06.2016

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿನಾಂಕ 14.03.2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ–7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ 22.06.2016ರ ಆದೇಶದ ಆದೇಶ ಭಾಗದ ಕಂಡಿಕೆ 1(2)ರಲ್ಲಿ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ / ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ / ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಛೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದೆಂದು ಹಾಗೂ ಆಯಾ ಇಲಾಖೆ / ಸಂಸ್ಥೆಗಳ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (Officer next in seniority) ಸದರಿ ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿರುತ್ತದೆ.

Govt. Fly. Training School
No. 549
Date 23/7/16

Acd/s 23/7/16

ಅದರಂತೆ ಪರಿಶೀಲಿಸಿ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವಾಲಯದ ಅಧೀನದಲ್ಲಿ ಬರುವ ಇಲಾಖೆಯಾದ ಸರ್ಕಾರಿ ವೈಮಾನಿಕ ತರಬೇತಿ ಶಾಲೆಗೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 106 ಸಮನ 2016**
**ಬೆಂಗಳೂರು, ದಿನಾಂಕ: 19/07/2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕಾರ್ಯದರ್ಶಿ, ಸರ್ಕಾರಿ ವೈಮಾನಿಕ ತರಬೇತಿ ಶಾಲೆ ಇವರನ್ನು ಸದರಿ ಶಾಲೆಯ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಆರ್. ಪ್ರಭುಶಂಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ದೂರವಾಣಿ ಸಂಖ್ಯೆ: 080-22032596.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಿ.ಬಿ. ನಂ.5329, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು
3. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ
5. ನಿರ್ದೇಶಕರು, ಸರ್ಕಾರಿ ವೈಮಾನಿಕ ತರಬೇತಿ ಶಾಲೆ, ಜಕ್ಕೂರು, ಬೆಂಗಳೂರು
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
7. ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜಾಗೃತ ವಿಭಾಗ)
8. ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರಾಂಕಿತ ಆಪ್ತ ಸಹಾಯಕಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
11. ಸರ್ಕಾರದ ಉಪ ಕಾರ್ಯದರ್ಶಿಗಳ ಪತ್ರಾಂಕಿತ ಆಪ್ತ ಸಹಾಯಕಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು